# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯದಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಆದ್ಯಾದೇಶ 2013 ನ್ನು ಅನುಷ್ಠಾನಗೊಳಿಸುವ ಬಗ್ಗೆ ಜಿಲ್ಲಾ ನೋಡಲ್ ಅಧಿಕಾರಿಗಳನ್ನು ನೇಮಿಸುವ ಕುರಿತು.

****

**ಪ್ರಸ್ತಾವನೆ**

ಕೇಂದ್ರ ಸರ್ಕಾರವು ದಿನಾಂಕ. 05.07.2013 ರಂದು ಕೇಂದ್ರ ಸರ್ಕಾರದ ವಿಶೇಷ ಗೆಜೆಟ್ ಪ್ರಕಟಣೆಯಲ್ಲಿ ದೇಶದಾದ್ಯಂತ ಆಹಾರ ಭದ್ರತೆಯನ್ನು ಒದಗಿಸಲು ಆಹಾರ ಧಾನ್ಯಗಳನ್ನು ವಿತರಿಸುವ 2013ರ ರಾಷ್ಟ್ರೀಯ ಆಹಾರ ಭದ್ರತಾ ಆದೇಶ 2013ನ್ನು ಜಾರಿಗೆ ತಂದಿರುತ್ತದೆ. ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ 2013ನ್ನು ಸಂಸತ್ತು ಅಂಗೀಕರಿಸಿದೆ. ಆಹಾರ ಭದ್ರತಾ ಕಾಯಿದೆಯನ್ನು ಅನುಷ್ಠಾನಗೊಳಿಸಲು ರಾಷ್ಟ್ರೀಯ ಆಹಾರ ಭದ್ರತಾ ಆದ್ಯಾದೇಶ 2013 ಸೆಕ್ಷನ್ 14 ರನ್ವಯ ರಾಜ್ಯದಲ್ಲಿ ಸಹಾಯಕ ನಿರ್ದೇಶಕರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಬೇಕಾಗಿರುತ್ತದೆ. ಆದುದರಿಂದ ಈ ಕೆಳಕಂಡಂತೆ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಆನಾಸ 52 ಡಿಆರ್‌ಎ 2013, ಬೆಂಗಳೂರು, ದಿನಾಂಕ. 05.09.2013**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ ಮತ್ತು ಆದ್ಯಾದೇಶ 2013 ಸೆಕ್ಷನ್ 14 ರನ್ವಯ ಸಾರ್ವಜನಿಕ ಕುಂದುಕೊರತೆಗಳ ನಿವಾರಣೆಗಾಗಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ನಿರ್ದೇಶಕರುಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಆರ್. ವಿಜಯಾನಂದ ಶರ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಇಲಾಖೆ.

o/c

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಈ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಅದರ 200 ಪ್ರತಿಗಳನ್ನು ಒದಗಿಸಲು ಕೋರಿದೆ.

ಪು.ತಿ.ನೋ.